<u>ಕರ್ನಾಟಕ ಸರ್ಕಾರ</u>

ಸಂಖ್ಯೆ:ಕಂಇ 344 ಮುನೋಮು 2008

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:12.08.2009.

<u>ಸುತ್ತೋಲೆ</u>

ನೋಂದಣಿ ಮಹಾಪರಿವೀಕ್ಷಕರು ಹಾಗು
ಮುದ್ರಾಂಕಗಳ ... ಕಛೇರಿ
ನಂ. 720, ... ...ನಗರ,
ಬೆಂಗಳೂರು ... 82
ಸ್ವೀಕೃತಿ ಸಂ: 5435
ದಿನಾಂಕ: 14-08-2009

ವಿಷಯ: ದಸ್ತಾವೇಜು ನೋಂದಣಿಗೆ ಸಂಬಂಧಪಟ್ಟ ರಾಜ್ಯ ಮತ್ತು ಕೇಂದ್ರ ಶಾಸನಗಳಿಗೆ ಅನುಗುಣವಾಗಿ ಸ್ಥಿರಾಸ್ತಿಗಳ ಹಸ್ತಾಂತರಗನ್ನೊಳಗೊಂಡ ದಸ್ತಾವೇಜುಗಳ ನೋಂದಣಿಗೆ ಸಂಬಂಧಿಸಿದಂತೆ ಮಾರ್ಗದರ್ಶನ ಸೂಚನೆಗಳು-ಸ್ಪಷ್ಟೀಕರಣ.

ಉಲ್ಲೇಖ:
1) ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 344 ಮುನೋಮು 2008 ದಿನಾಂಕ:06-04-2009.
2) ನೋಂದಣಿ ಮಹಾ ಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರ ಸುತ್ತೋಲೆ ಸಂಖ್ಯೆ:ಆರ್‌ಜಿಎನ್12/09-10 ದಿನಾಂಕ:23-05--2009.
3) ನೋಂದಣಿ ಮಹಾ ಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರ ಪತ್ರ ಸಂಖ್ಯೆ:ಆರ್‌ಜಿಎನ್12/09-10 ದಿ:09-07-09.

Rgn.

*****

ದಸ್ತಾವೇಜು ನೋಂದಣಿಗೆ ಸಂಬಂಧಿಸಿದಂತೆ, ಉಲ್ಲೇಖ (1) ರ ಸುತ್ತೋಲೆ ಅನ್ವಯ ಸರ್ಕಾರದಿಂದ ವಿವರವಾದ ಮಾರ್ಗದರ್ಶನ ಸೂಚನೆಗಳನ್ನು ನೀಡಲಾಗಿತ್ತು. ಈ ಸುತ್ತೋಲೆಯ ಅನುಷ್ಠಾನದಲ್ಲಿ ಕೆಲವು ತೊಂದರೆಗಳನ್ನು ಎದುರಿಸುತ್ತಿರುವುದಾಗಿ ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು ತಮ್ಮ ಪತ್ರ ಸಂಖ್ಯೆ:ಆರ್‌ಜಿಎನ್ 12/2009-10, ದಿನಾಂಕ 09.07.2009 ರ ಮೇರೆಗೆ ತಿಳಿಸಿ ಸರ್ಕಾರದಿಂದ ಈ ಬಗ್ಗೆ ಸ್ಪಷ್ಟೀಕರಣ ನೀಡುವಂತೆ ಕೋರಿರುತ್ತಾರೆ. ಸದರಿ ಪತ್ರದಲ್ಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದೆ ಮತ್ತು ಸಾರ್ವಜನಿಕರಿಗೆ ಈ ಬಗ್ಗೆ ಆಗುತ್ತಿರುವ ತೊಂದರೆಗಳು ಹಾಗೂ ಸಮಸ್ಯೆಗಳ ನಿವಾರಣೆಗಾಗಿ ಈ ಕೆಳಕಂಡ ಸ್ಪಷ್ಟೀಕರಣಗಳನ್ನು ನೀಡಿದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ 2006 ರಲ್ಲಿ ಹೊಸದಾಗಿ ಸೇರಿಸಲಾಗಿರುವ ಗ್ರಾಮ ಪಂಚಾಯತಿಗಳು, ಪುರಸಭೆ ಹಾಗೂ ನಗರಸಭೆಗಳ ಸ್ಥಿರಾಸ್ತಿಗಳಿಗೆ ಸಂಬಂಧಿಸಿದಂತೆ ಖಾತೆ ಮತ್ತು ಅಸೆಸ್‌ಮೆಂಟ್‌ಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಕ್ಷಮ ಅಧಿಕಾರಿಗಳಿಂದ ದೃಢೀಕರಣ ಪಡೆಯುವ ಬದಲಿಗೆ ಹಿಂದಿನ ಆಡಳಿತ ವ್ಯಾಪ್ತಿಗೆ ಬರುವ ಗ್ರಾಮ ಪಂಚಾಯಿತಿ, ಪುರಸಭೆ ಹಾಗೂ ನಗರಸಭೆಗಳಿಂದ ನೀಡಿದ ಖಾತೆ ಮತ್ತು ಅಸೆಸ್‌ಮೆಂಟ್ ಉದ್ಧೃತ ಭಾಗಗಳೊಂದಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸ್ವಯಂ ಘೋಷಿತ ಆಸ್ತಿ ತೆರಿಗೆ ಯೋಜನೆಯಡಿ ಸಲ್ಲಿಸಿರುವ ಅರ್ಜಿ ಮತ್ತು ಪಾವತಿ ಮಾಡಿದ ಕಂದಾಯ ರಸೀತಿಯ ಪ್ರತಿಗಳನ್ನು ಹಾಜರುಪಡಿಸಿದಲ್ಲಿ ನೋಂದಣಾಧಿಕಾರಿಗಳು ಇವುಗಳನ್ನು ಪರಿಶೀಲಿಸಿ ದಸ್ತಾವೇಜನ್ನು ನೋಂದಣಿಗೆ ಸ್ವೀಕರಿಸಬಹುದು.

14/8/09

ಅಪಾರ್ಟ್‌ಮೆಂಟ್ ಮತ್ತು ಫ್ಲಾಟ್‌ಗಳಿಗೆ ಸಂಬಂಧಿಸಿದಂತೆ ಮೊದಲ ಕ್ರಯಪತ್ರ ನೋಂದಣಿಯಾಗಿದ್ದು, ತದನಂತರದ ಹಸ್ತಾಂತರ ದಸ್ತಾವೇಜುಗಳನ್ನು ನೋಂದಣಿಗೆ ಹಾಜರುಪಡಿಸಿದಲ್ಲಿ ನೋಂದಣಿಯಾದ ಮೊದಲ ಕ್ರಯಪತ್ರದ ಪ್ರತಿಯನ್ನು ಪಡೆದು ತದನಂತರದ ದಸ್ತಾವೇಜುಗಳನ್ನು ನೋಂದಾಯಿಸಲು ಕ್ರಮ ಕೈಗೊಳ್ಳುವುದು.

ಈ ಬಗ್ಗೆ ಈಗಾಗಲೇ ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು ಈ ಬಗ್ಗೆ ನೀಡಿರುವ ಸುತ್ತೋಲೆ ಸಂಖ್ಯೆ: ಆರ್‌ಜಿಎಸ್ 12/2009-10 ದಿನಾಂಕ: 23.05.2009 ಇದರಲ್ಲಿನ ಸ್ಪಷ್ಟೀಕರಣವನ್ನು ಸಹ ಈ ಮೂಲಕ ಅನುಮೋದಿಸಲಾಗಿದೆ.

(ಹೆಚ್.ವಿಶ್ವನಾಥ್)
ಸರ್ಕಾರದ ಕಾರ್ಯದರ್ಶಿ
ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ)

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ 1000 ಪ್ರತಿಗಳನ್ನು ಕಂದಾಯ ಇಲಾಖೆಗೆ ಒದಗಿಸಲು ಕೋರಿದೆ.

ಪ್ರತಿ:

1) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3) ಅಭಿವೃದ್ಧಿ ಆಯುಕ್ತರು ಮತ್ತು ಅಪರ ಮುಖ್ಯ ಕಾರ್ಯದರ್ಶಿಗಳು, ಬೆಂಗಳೂರು.
4) ಸರ್ಕಾರದ ಕಾರ್ಯದರ್ಶಿಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.
5) ಸರ್ಕಾರದ ಕಾರ್ಯದರ್ಶಿಗಳು, ಕಾನೂನು ಇಲಾಖೆ.
6) ಸರ್ಕಾರದ ಕಾರ್ಯದರ್ಶಿಗಳು, ವಸತಿ ಇಲಾಖೆ.
7) ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
8) ನಿರ್ದೇಶಕರು, ನಗರ ಯೋಜನಾ ಪ್ರಾಧಿಕಾರ, ಬೆಂಗಳೂರು.
9) ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು, ಬೆಂಗಳೂರು.
10) ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
11) ರಾಜ್ಯದ ಎಲ್ಲಾ ಪ್ರಾದೇಶಿಕ ಆಯುಕ್ತರು.
12) ನಿರ್ದೇಶಕರು, ಭೂ ಮಾಪನ ಹಾಗೂ ಭೂ ದಾಖಲೆಗಳ ಇಲಾಖೆ, ಬೆಂಗಳೂರು.
13) ಎಲ್ಲಾ ಜಿಲ್ಲಾಧಿಕಾರಿಗಳು.
14) ಎಲ್ಲಾ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
15) ಎಲ್ಲಾ ಜಿಲ್ಲಾ ನೋಂದಣಾಧಿಕಾರಿಗಳ ಕಛೇರಿಗಳಿಗೆ- ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರ ಮುಖಾಂತರ.
16) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
17) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
18) ಎಲ್ಲಾ ಮಹಾನಗರ ಪಾಲಿಕೆಗಳ ಆಯುಕ್ತರು.
19) ಎಲ್ಲಾ ನಗರ ಪಾಲಿಕೆ ಆಯುಕ್ತರು.
20) ಎಲ್ಲಾ ನಗರ ಸಭೆ ಆಯುಕ್ತರು.
21) ಸರ್ಕಾರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು(ಸಚಿವ ಸಂಪುಟ), ಬೆಂಗಳೂರು.
22) ಎಲ್ಲಾ ಉಪ ವಿಭಾಗೀಯ ಅಧಿಕಾರಿಗಳು.
23) ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿಗಳು.